# ಬೆಂಗಳೂರಿನ ಚಿತ್ರಣ ಬದಲಿಸುವೆವು

## ವಿಧಾನಸಭೆಯಲ್ಲಿ ಸಿಎಂ ಭರವಸೆ | ಜಾಗತಿಕ ನಗರವಾಗಿಸಲು ಬೆಂಗಳೂರು ಮಿಷನ್-2022 ಯೋಜನೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು 6-2-21

ಬೆಂಗಳೂರಿನ ಚಿತ್ರಣ ಬದಲು ಮಾಡಲು ನಮ್ಮ ಸರ್ಕಾರ ಬದ್ಧವಾಗಿದ್ದು, ವಿವಿಧ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಶುಕ್ರವಾರ ವಿಧಾನಸಭೆಯಲ್ಲಿ ಹೇಳಿದ್ದಾರೆ.

ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಗೆ ಉತ್ತರಿಸಿದ ಅವರು, ಜಾಗತಿಕವಾಗಿ ಗಮನ ಸೆಳೆದಿರುವ ಬೆಂಗಳೂರಿಗೆ ಜಾಗತಿಕ ಮಟ್ಟದ ಮೂಲಸೌಕರ್ಯ ಸೃಷ್ಟಿಸಲು ವಿಶೇಷ ಆದ್ಯತೆ ನೀಡಲಾಗುತ್ತಿದೆ. ಜೀವನ ಮಟ್ಟ ಸುಧಾರಿಸುವ ನಿಟ್ಟಿನಲ್ಲಿ 'ಬೆಂಗಳೂರು ಮಿಷನ್ -2022'ಕ್ಕೆ ಚಾಲನೆ ಕೊಡಲಾಗಿದೆ. 8,015 ಕೋಟಿ ರೂ. ವೆಚ್ಚ ಮೂಲ ಸೌಕರ್ಯ ಮತ್ತು ಅಭಿವೃದ್ಧಿ ಕಾರ್ಯಗಳಿಗೆ ಅನುಮೋದನೆ ನೀಡಲಾಗಿದೆ. 256 ಎಕರೆ ಪ್ರದೇಶದಲ್ಲಿ 14,909 ವಸತಿ ಘಟಕಗಳನ್ನು ನಿರ್ಮಿಸುವ ಸಲುವಾಗಿ 35 ವಸತಿ ಯೋಜನೆಗಳಿಗೆ ಚಾಲನೆ ನೀಡಲಾಗಿದೆ ಎಂದು ಹೇಳಿದರು.

ನಮ್ಮ ಮೆಟ್ರೋ ಹಂತ 2 ಮತ್ತು ಹಂತ 2ಎ ಕಾಮಗಾರಿಗಳು ಪ್ರಗತಿಯಲ್ಲಿವೆ. 2022ರೊಳಗೆ 75 ಕಿ.ಮೀ.ಗಳ ಮೆಟ್ರೋ ಮಾರ್ಗ ನಿರ್ಮಿಸುವ ಗುರಿ ಹಾಕಿಕೊಳ್ಳಲಾಗಿದೆ. ಬೆಂಗಳೂರಿನ ಸಂಚಾರ ದಟ್ಟಣೆಯನ್ನು ನಿವಾರಿಸಲು 15,767 ಕೋಟಿ ರೂ. ವೆಚ್ಚದಲ್ಲಿ ಬೆಂಗಳೂರು ಉಪನಗರ ರೈಲು ಯೋಜನೆ ಅನುಷ್ಠಾನಕ್ಕೆ ಈಗಾಗಲೇ ಅನುಮೋದನೆ ಸಿಕ್ಕಿದೆ ಎಂದರು.

4,755 ಕೋಟಿ ರೂ. ವೆಚ್ಚದಲ್ಲಿ 3,459 ಕಿ.ಮೀ. ರಸ್ತೆ ಅಭಿವೃದ್ಧಿ ಮತ್ತು 202 ಸೇತುವೆ ನಿರ್ಮಾಣ ಮಾಡಲಾಗಿದೆ. ಉತ್ತಮ ಪ್ರಶಾಸನಕ್ಕಾಗಿ ಪ್ರತ್ಯೇಕ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ ರಚನೆ ಮಾಡಲಾಗಿದೆ. ಬಿಡಿಎ ಕಾರ್ಯವೈಖರಿಯನ್ನು ಖುದ್ದು ಪರಿಶೀಲಿಸಿದ್ದು, ಅಕ್ರಮಗಳಿಗೆ ಮತ್ತು ಭ್ರಷ್ಟಾಚಾರಕ್ಕೆ ಇತಿಶ್ರೀ ಹೇಳಲಾಗುವುದು. ಇನ್ನು 4-5 ತಿಂಗಳಲ್ಲಿ ಅಲ್ಲಿ ಕಣ್ಣಿಗೆ ಕಾಣುವ ಬದಲಾವಣೆ ತರಲಾಗುವುದು ಎಂದರು.

2020ರ ಜೂನ್‌ನಿಂದ 2021ರ ಜನವರಿವರೆಗೆ ವಿವಿಧ ಪ್ರಕರಣಗಳಲ್ಲಿ 400 ಕೋಟಿ ರೂ.ಗಳಿಗೂ ಅಧಿಕ ಮೌಲ್ಯದ ಅಕ್ರಮಗಳನ್ನು ಪತ್ತೆ ಹಚ್ಚಲಾಗಿದೆ. ಪ್ರಕರಣಗಳಲ್ಲಿ ಭಾಗಿಯಾದ ಅಧಿಕಾರಿಗಳು ಹಾಗೂ ಸಿಬ್ಬಂದಿ ಮತ್ತು ಸಾರ್ವಜನಿಕರ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಾಗಿದೆ. 2019ನೇ ಸಾಲಿನಿಂದ ಇಲ್ಲಿಯವರೆಗೆ ಪ್ರಾಧಿಕಾರದ ವೃಂದದ 22 ನೌಕರರನ್ನು ಅಮಾನತು ಮಾಡಿ ಆ ಪೈಕಿ 12 ಮಂದಿಯನ್ನು ಇಲಾಖಾ ವಿಚಾರಣೆ ಬಾಕಿ ಇಟ್ಟು ಸೇವೆಗೆ ಮರುನಿಯೋಜಿಸಲಾಗಿದೆ. 19 ಅಧಿಕಾರಿ, ನೌಕರರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ ಎಂದು ಸಿಎಂ ತಿಳಿಸಿದರು.

ಬಿಡಿಎನಲ್ಲಿ ಮೂಲೆ ನಿವೇಶನಗಳ ಪೈಕಿ 2020-21ರವರೆಗೆ 1,572 ನಿವೇಶನಗಳು ಮಾರಾಟವಾಗಿದ್ದು, 1,422 ಕೋಟಿ ರೂ. ಸಂಗ್ರಹವಾಗಿದೆ. ಪ್ರಾಧಿಕಾರದ ಇತಿಹಾಸದಲ್ಲಿಯೇ ಅಧಿಕ ಸಂಖ್ಯೆಯಲ್ಲಿ ನಿವೇಶನಗಳ ಮಾರಾಟ ಸಾರ್ವಜನಿಕ ದಾಖಲೆಯಾಗಿದೆ. ಇ-ಹರಾಜು ಮಾರಾಟದಲ್ಲಿ ಮೂಲ ಬೆಲೆಯ ಮೊತ್ತದ ಶೇ.55.76 ಹೆಚ್ಚಿನ ಬೆಲೆ ಬಂದಿದೆ ಎಂದು ಹೇಳಿದರು.



ವಿಧಾನಸಭೆಯಲ್ಲಿ ಶುಕ್ರವಾರ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸದಸ್ಯರಿಗೆ ಉತ್ತರ ನೀಡಿದರು.

### ಭೂಗಳ್ಳರ ಪಾಲಾಗಿದ್ದ 300 ಎಕರೆ ವಶಕ್ಕೆ

2020ರ ಜೂನ್‌ನಿಂದ ಇಲ್ಲಿಯವರೆಗೆ ಬಿಡಿಎಯಿಂದ ಭೂ ಸ್ವಾಧೀನಕ್ಕೊಳಗಾಗಿ ಭೂಗಳ್ಳರ ಪಾಲಾಗಿದ್ದ ನಗರದ ವಿವಿಧ ಪ್ರದೇಶದ 300 ಎಕರೆಗೂ ಅಧಿಕ ಜಮೀನನ್ನು ಪತ್ತೆ ಹಚ್ಚಲಾಗಿದೆ. ಇದರ ಮೌಲ್ಯ 3 ಸಾವಿರ ಕೋಟಿಗೂ ಅಧಿಕ ಎಂದು ಅಂದಾಜಿಸಲಾಗಿದೆ. ಈ ಎಲ್ಲಾ ಸ್ವತ್ತುಗಳನ್ನು ವಶಪಡಿಸಿಕೊಳ್ಳುವ ಕೆಲಸಕ್ಕೆ ಚಾಲನೆ ನೀಡಲಾಗಿದೆ ಎಂದು ಸಿಎಂ ಹೇಳಿದರು.

ವಿಧಾನಮಂಡಲ ಅಧಿವೇಶನ

ಬಿಡಿಎ ಜಾಗೃತ ದಳಕ್ಕೆ ಎಫ್ಐಆರ್ ದಾಖಲಿಸುವ ಅಧಿಕಾರ ವಿಲ್ಲ. ಇದರಿಂದ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ಹಿನ್ನಡೆಯಾಗಿದೆ. ಆದ್ದರಿಂದ ಜಾಗೃತದಳವನ್ನು ಸದೃಢಗೊಳಿಸಲು ಸರ್ಕಾರಕ್ಕೆ ಬಿಡಿಎ ಪತ್ರ ಬರೆದಿದ್ದು, ಈ ಬಗ್ಗೆ ಶೀಘ್ರ ನಿರ್ಣಯ ಕೈಗೊಳ್ಳಲಾಗುವುದೆಂದರು.

ಬಿಡಿಎನಲ್ಲಿ ನಡೆದಿರುವ ಸಗಟು ಹಂಚಿಕೆ ಹಾಗೂ ಮತ್ತಿತರ ಅವ್ಯವಹಾರಗಳ ತನಿಖೆ ನಡೆಸಲು ಎಸ್ಐಟಿ ರಚನೆಗೆ ನಿರ್ಧರಿಸಲಾಗಿದೆ ಎಂದು ಹೇಳಿದರು.

ಚಾಲ್ತಿಯಲ್ಲಿರುವ ನಿಯಮಾವಳಿಗಳ ಪ್ರಕಾರ ಬಿಡಿಎ ಅಧಿಕಾರಿ ಸಿಬ್ಬಂದಿ ವರ್ಗಾವಣೆಗೆ ಅವಕಾಶ ಇರುವುದಿಲ್ಲ. ನೌಕರರು ಒಂದೇ ಕಡೆ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಭ್ರಷ್ಟಾಚಾರಕ್ಕೆ ಕಾರಣವೆಂದು ತಿಳಿದುಬಂದ ಹಿನ್ನೆಲೆಯಲ್ಲಿ ಬಿಡಿಎ ಕಾಯ್ದೆ 1976 ಅಧಿನಿಯಮ 50ಕ್ಕೆ ತಿದ್ದುಪಡಿ ಮಾಡಿ ಇತರೆ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ವರ್ಗಾವಣೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಯಡಿಯೂರಪ್ಪ ತಿಳಿಸಿದರು.

ಬೆಂಗಳೂರು ಸ್ಮಾರ್ಟ್ ಸಿಟಿ ಯೋಜನೆಯಡಿ 32 ಕಾಮಗಾರಿ ಬರುವ ಮೇ ಒಳಗಾಗಿ ಪೂರ್ಣಗೊಳ್ಳಲಿವೆ. 930 ಕೋಟಿ ರೂ. ವೆಚ್ಚದ 37 ಕಾಮಗಾರಿಗಳು ನಡೆದಿದ್ದು, ನಾಲ್ಕು ಪೂರ್ಣಗೊಂಡಿವೆ. 29 ಕಾಮಗಾರಿ ಪ್ರಗತಿಯಲ್ಲಿದೆ. 4 ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ ಎಂದು ಮುಖ್ಯಮಂತ್ರಿ ವಿವರ ನೀಡಿದರು.

### ಎಲೆಕ್ಟ್ರಿಕ್ ಬಸ್ ಖರೀದಿಗೆ ಒತ್ತು

ರಾಜಧಾನಿಯಲ್ಲಿ ಹೆಚ್ಚುತ್ತಿರುವ ವಾಯುಮಾಲಿನ್ಯ ತಡೆಯಲು ಎಲೆಕ್ಟ್ರಿಕ್ ಬಸ್‌ಗಳ ಖರೀದಿಗೆ ಒತ್ತು ನೀಡಲಾಗಿದೆ. ಕೇಂದ್ರ ಸರ್ಕಾರ ಬಸ್ ಖರೀದಿಗೆ ಶೇ.30 ಸಬ್ಸಿಡಿ ನೀಡುತ್ತದೆ. ಮೇಕ್ ಇನ್ ಇಂಡಿಯಾ ಯೋಜನೆಯಡಿ ಪ್ರೋತ್ಸಾಹ ನೀಡಲು ನಿರ್ಧಾರ ಮಾಡಲಾಗಿದೆ ಎಂದು ಮೇಲ್ಮನೆಯಲ್ಲಿ ಡಿಸಿಎಂ ಲಕ್ಷ್ಮಣ ಸವದಿ ತಿಳಿಸಿದ್ದಾರೆ. ಬಿಜೆಪಿಯ ಮಹಾಂತೇಶ ಕವಟಗಿಮಠ ಅವರ ಪ್ರಶ್ನೆಗೆ ಉತ್ತರಿಸಿದ ಅವರು, 90 ಹವಾನಿಯಂತ್ರಿತವಲ್ಲದ ಬಸ್ ಖರೀದಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ. ಇನ್ನೂ 90 ಬಸ್‌ಗಳ ಖರೀದಿಗೆ ಟೆಂಡರ್ ಕರೆಯಲಾಗಿದೆ ಎಂದರು. ಟೆಂಡರ್‌ನಲ್ಲಿ ಹೆಚ್ಚಿನ ಕಂಪನಿಗಳು ಭಾಗವಹಿಸಿವೆ. ಸ್ಥಳೀಯ ಕಂಪನಿಗಳಿಗೆ ಅವಕಾಶ ನೀಡಲಾಗಿದೆ. ಪ್ರಯಾಣಿಕರಿಂದ ಸಂಗ್ರಹವಾದ ಹಣ ಖಾಸಗಿಯವರಿಗೆ ನೀಡಲಾಗುತ್ತದೆ ಎಂದರು.

### ಪಡಿತರ ಚೀಟಿ ವಿತರಣೆಗೆ ಕ್ರಮ

ಬಿಪಿಎಲ್ ಹೊಸ ಪಡಿತರ ಚೀಟಿ ವಿತರಣೆಗೆ ಇನ್ನು 15 ದಿನಗಳಲ್ಲೇ ಕ್ರಮಕೈಗೊಳ್ಳಲಾಗುತ್ತದೆ ಎಂದು ಆಹಾರ ಸಚಿವ ಉಮೇಶ್ ಕತ್ತಿ ವಿಧಾನಸಭೆಯಲ್ಲಿ ಭರವಸೆ ನೀಡಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರ ಒತ್ತಡದ ನಡುವೆ, ಆನ್‌ಲೈನ್‌ನಲ್ಲಿ ಅರ್ಜಿ ಸ್ವೀಕಾರಕ್ಕೆ ಅವಕಾಶ ನೀಡಿ, ಕಾರ್ಡ್ ವಿತರಿಸಲು 15 ದಿನದಲ್ಲೇ ನಿರ್ಧರಿಸಲಾಗುತ್ತದೆ ಎಂದು ಹೇಳಿದರು.

### ಮುಂದಿನ ಅಧಿವೇಶನದಲ್ಲಿ ಚರ್ಚೆ

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪಯೋಜನೆಗೆ ಹೆಚ್ಚು ಹಣ ಬಳಸಿದ್ದು ಯಾರು? ಎಂಬ ವಿಚಾರವಾಗಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ತೀವ್ರ ಜಟಾಪಟಿ ನಡೆದಿದ್ದು, ಮುಂದಿನ ಅಧಿವೇಶನದಲ್ಲಿ ವಿಶೇಷ ಚರ್ಚೆ ನಡೆಸಲು ಒಪ್ಪಿಕೊಂಡಿದ್ದಾರೆ. ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ವಿಷಯ ಪ್ರಸ್ತಾಪಿಸಿ, ಎಸ್ಸಿಪಿ ಎಸ್ಟಿಪಿ ಹಣವನ್ನು ಡೀಮ್ಡ್ ವೆಚ್ಚ ಹೆಸರಲ್ಲಿ ಬೇರೆ ಉದ್ದೇಶಕ್ಕೆ ಬಳಸಲಾಗಿದೆ ಎಂದು ಆಕ್ಷೇಪಿಸಿದಾಗ ಸಿಎಂ ಯಡಿಯೂರಪ್ಪ, ಡಿಸಿಎಂ ಗೋವಿಂದ ಕಾರಜೋಳ, ನಮ್ಮ ಸರ್ಕಾರ ಪರಿಶಿಷ್ಟರ ಪರವಾಗಿದೆ. ಯಾವುದೇ ಅನ್ಯಾಯ ಮಾಡಿಲ್ಲ ಎಂದು ವಿವಿಧ ಯೋಜನೆಯ ಅಂಕಿ- ಅಂಶ ನೀಡಲು ಮುಂದಾದರು. ಆಗ ಪ್ರತಿಪಕ್ಷ ಸದಸ್ಯರು ವಾದಕ್ಕಿಳಿದರು. ಅಂತಿಮವಾಗಿ ಮುಂದಿನ ಅಧಿವೇಶನದಲ್ಲಿ ವಿಶೇಷ ಚರ್ಚೆಗೆ ಎರಡು ಕಡೆಯವರು ಒಪ್ಪಿದರು. ಸ್ಪೀಕರ್ ಕೂಡ ಸಹಮತ ವ್ಯಕ್ತಪಡಿಸಿದರು.

» ಎಸ್ಸಿಪಿ- ಎಸ್ಟಿಪಿ ಜಟಾಪಟಿ

### ಅತಿಥಿ ಉಪನ್ಯಾಸಕರಿಗೆ ಶೀಘ್ರ ಕೆಲಸ

ಕೋವಿಡ್ ಕಾರಣಕ್ಕೆ ಶೇ.50 ಮಾತ್ರ ಅತಿಥಿ ಉಪನ್ಯಾಸಕರನ್ನು ತೆಗೆದುಕೊಳ್ಳಬೇಕು ಎಂದು ಸೂಚಿಸಲಾಗಿತ್ತು. ಶೀಘ್ರವೇ ಎಲ್ಲ ಅತಿಥಿ ಉಪನ್ಯಾಸಕರನ್ನು ಕರ್ತವ್ಯಕ್ಕೆ ತೆಗೆದುಕೊಳ್ಳುವಂತೆ ಸೂಚನೆ ನೀಡಲಾಗುವುದು ಎಂದು ಡಿಸಿಎಂ ಡಾ. ಸಿ.ಎನ್. ಅಶ್ವತ್ಥನಾರಾಯಣ ಮೇಲ್ಮನೆಯಲ್ಲಿ ತಿಳಿಸಿದ್ದಾರೆ. ಜೆಡಿಎಸ್‌ನ ಮರಿತಿಬ್ಬೇಗೌಡರ ಪ್ರಸ್ತಾಪಿಸಿದ್ದಕ್ಕೆ ಉತ್ತರಿಸಿದ ಡಿಸಿಎಂ, ರಾಜ್ಯದಲ್ಲಿ 14,183 ಅತಿಥಿ ಉಪನ್ಯಾಸಕರಿದ್ದು, ಅವರ ಸ್ಥಿತಿ ಸಂಕಷ್ಟದಲ್ಲಿರುವುದು ಗಮನಕ್ಕೆ ಬಂದಿದೆ. ಈಗಾಗಲೆ 5 ತಿಂಗಳ ಗೌರವಧನವನ್ನು ಅವರಿಗೆ ಬಿಡುಗಡೆ ಮಾಡಲಾಗಿದೆ ಎಂದರು. ಬಿಜೆಪಿಯ ಆಯನೂರು ಮಂಜುನಾಥ್ ಸೇರಿ ಕೆಲ ಸದಸ್ಯರು ಈ ಬಗ್ಗೆ ಸದನದಲ್ಲಿ ಪ್ರಸ್ತಾಪಿಸಿದ್ದರು.

### ನೇಕಾರರಿಂದಲೇ ಬಟ್ಟೆ ಖರೀದಿಗೆ ಕ್ರಮ

ಇನ್ಮುಂದೆ ಹೊರ ರಾಜ್ಯದಿಂದ ಬಟ್ಟೆ ಖರೀದಿ ಮಾಡುವುದನ್ನು ನಿಲ್ಲಿಸಿ, ನೇಕಾರರಿಂದಲೇ ಬಟ್ಟೆ ಖರೀದಿ ಮಾಡಲಾಗುವುದು ಎಂದು ಕೈಮಗ್ಗ ಮತ್ತು ಜವಳಿ ಸಚಿವ ಶ್ರೀಮಂತ ಪಾಟೀಲ್ ಪರಿಷತ್‌ನಲ್ಲಿ ತಿಳಿಸಿದ್ದಾರೆ. ಬಿಜೆಪಿಯ ಭಾರತಿ ಶೆಟ್ಟಿ ಪ್ರಶ್ನೆಗೆ ಉತ್ತರಿಸಿ, ಶಾಲೆ-ಕಾಲೇಜುಗಳಿಗೆ, ಅಂಗನವಾಡಿಗಳಿಗೆ ಅಗತ್ಯವಿರುವ ಬಟ್ಟೆಯನ್ನು ಖರೀದಿಸಲಾಗುವುದು ಎಂದರು. ರಾಜ್ಯದಲ್ಲಿ 70 ಲಕ್ಷ ನೇಕಾರರಿದ್ದಾರೆ. 1.5 ಕೋಟಿ ಮೀಟರ್ ಬಟ್ಟೆ ಉತ್ಪಾದನೆ ಮಾಡಿರುವ ಉದಾಹರಣೆ ಇದೆ. ಸಂಕಷ್ಟದಲ್ಲಿರುವ ನೇಕಾರರಿಗೆ ಸಹಾಯ ಮಾಡಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಭಾರತಿಶೆಟ್ಟಿ ಗಮನ ಸೆಳೆದಿದರು.